ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ. DTE-ADMI0ACM2/ 98 /2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:19-08-2021.

**-:: ಅಧಿಸೂಚನೆ ::-**

**ವಿಷಯ:** 2021-22ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ **ಮೆರಿಟ್ ಆಧಾರದ ಮೇಲೆ ಪ್ರವೇಶಾತಿ ವಿಧಾನದ 26 ಸರ್ಕಾರಿ ಮತ್ತು 08 ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ** ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಪ್ರವೇಶಾಧಿಸೂಚನೆ ಸಂ. DTE-ADMI0ACM2/ 96 /2021, ದಿ:11-08-2021.

-00000000-

ಉಲ್ಲೇಖಿತ ಪ್ರವೇಶಾಧಿಸೂಚನೆಯಲ್ಲಿ ನಮೂದಿಸಿರುವಂತೆ **ಮೆರಿಟ್ ಆಧಾರದ ಮೇಲೆ ಪ್ರವೇಶಾತಿ ವಿಧಾನವನ್ನು ಅಳವಡಿಸಿರುವ 26 ಸರ್ಕಾರಿ ಹಾಗೂ 08 ಅನುದಾನಿತ** ಪಾಲಿಟೆಕ್ನಿಕ್‌ಗಳಲ್ಲಿನ (ಅನುದಾನಿತ ಕೋರ್ಸುಗಳು) ಪೂರ್ಣಾವಧಿಯ ಇಂಜಿನಿಯರಿಂಗ್ ಮತ್ತು ನಾನ್-ಇಂಜಿನಿಯರಿಂಗ್ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ 2021-22ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಭರ್ತಿ ಮಾಡಿದ ಅರ್ಜಿಯನ್ನು ಸಲ್ಲಿಸಲು ದಿನಾಂಕ:21-08-2021 ಕೊನೆಯ ದಿನಾಂಕವಾಗಿ ನಿಗಧಿಪಡಿಸಲಾಗಿತ್ತು.

ಆದರೆ, ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿ ಮೇರೆಗೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಇಲಾಖೆಯ ಅಧೀಕೃತ ವೆಬ್‌ಸೈಟ್‌ಗಳಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿ ಮತ್ತು ಆದ್ಯತಾ ಪಟ್ಟಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸುವ **ಅವಧಿಯನ್ನು ದಿನಾಂಕ:25-08-2021ರ ವರೆಗೆ ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಈ ಕೆಳಕಂಡಂತೆ ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಾಂಶುಪಾಲರುಗಳು ತಮ್ಮ ಸಂಸ್ಥೆಯ ವೆಬ್‌ಸೈಟ್ ಹಾಗೂ ಸೂಚನಾಫಲಕದಲ್ಲಿ ವಿದ್ಯಾರ್ಥಿಗಳ ಮಾಹಿತಿಗಾಗಿ ತಪ್ಪದೇ ಪ್ರಕಟಿಸುವುದು.

| | | | |
|---|---|---|---|
| 1) | ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿ ಪ್ರಕಟಣೆ ದಿನಾಂಕ | : | 27-08-2021 |
| 2)) | ಸೀಟು ಹಂಚಿಕೆ ಪ್ರಕಟಣೆಯ ದಿನಾಂಕ | : | 28-08-2021 |
| 3) | ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ನಿಗಧಿತ ಶುಲ್ಕದೊಂದಿಗೆ ಪ್ರವೇಶ ಪಡೆಯಲು ದಿನಾಂಕ: | : | 28-08-2021 ರಿಂದ 31-08-2021 ವರೆಗೆ |
| 4) | ಸೀಟುಗಳು ಭರ್ತಿ ಆಗದೆ ಉಳಿಕೆಯಾಗಿದ್ದಲ್ಲಿ ಅಂತಹ ಸೀಟುಗಳನ್ನು ಮೊದಲು ಬಂದವರಿಗೆ ಮೊದಲ ಆದ್ಯತೆಯ ಮೇಲೆ ಪ್ರಾಂಶುಪಾಲರ ಹಂತದಲ್ಲಿಯೇ ಆಫ್‌ಲೈನ್ ಮೂಲಕ ಹಂಚಿಕೆ ಮಾಡಲು ಪ್ರಾರಂಭ ಮತ್ತು ಅಂತಿಮ ದಿನಾಂಕ: | | 01-09-2021 ರಿಂದ 15-09-2021 ವರೆಗೆ |

Scanned with CamScanner

- <u>ವಿಶೇಷ ಗುಂಪಿನಡಿ ಬರುವ ಸ್ಪೋರ್ಟ್, ಎನ್.ಸಿ.ಸಿ ಮತ್ತು ಸ್ಕೌಟ್ಸ್&ಗೈಡ್ಸ್, ಸೈನಿಕ & ಮಾಜಿ-ಸೈನಿಕ, ಬಾಲಾಪರಾಧಿ ಕೋಟಾ, ಹೊರನಾಡು ಕನ್ನಡಿಗ / ಹೊರನಾಡು ಕನ್ನಡಿಗ ಕೋಟಾದ, ಐ.ಟಿ.ಐ, ಜೆ.ಓ.ಸಿ, ಜೆ.ಎಲ್.ಸಿ ಕೋಟಾದ ಮತ್ತು ವಿಶೇಷಚೇತನರ ಕೋಟಾ</u> ಪ್ರವರ್ಗಗಳಿಗೆ ಸ್ಥಾನಗಳನ್ನು ಮೀಸಲಿಸಿರುವ ಸಂಸ್ಥೆಗಳ ಪ್ರಾಂಶುಪಾಲರುಗಳು ದಿನಾಂಕ:11-08-2021ರಂದು ಹೊರಡಿಸಿರುವ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ನು ಅನುಸರಿಸಿ ಇಲಾಖೆಯು ಒದಗಿಸಿರುವ ತಂತ್ರಾಂಶದಲ್ಲಿ ದಿನಾಂಕ:27-08-2021ರ ಒಳಗೆ ವಿವರಗಳನ್ನು ಕಡ್ಡಾಯವಾಗಿ ತಪ್ಪದೇ ನಮೂದಿಸುವುದು. ಈ ರೀತಿ ನಮೂದಿಸಿದ ವಿದ್ಯಾರ್ಥಿಗಳಿಗೆ ದಿ:28-08-2021ರಂದು ಎಲ್ಲಾ ವರ್ಗದ ವಿದ್ಯಾರ್ಥಿಗಳ ಜೊತೆಗೆ ಸೀಟು ಹಂಚಿಕೆ ಮಾಡಲಾಗುವುದು.
- ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ಪ್ರವೇಶಾತಿ ಪ್ರಕ್ರಿಯೆ ನಡೆಸುವ ಸಂಸ್ಥೆಗಳಲ್ಲಿನ <u>ಎಸ್‌ಎನ್‌ಕ್ಯೂ ಕೋಟಾದ</u> ಸೀಟು ಹಂಚಿಕೆಯನ್ನು ನೇರವಾಗಿ ಇಲಾಖೆಯ ತಂತ್ರಾಂಶದ ಮೂಲಕವೇ ನಡೆಸಲಾಗುವುದು. ಆದ್ದರಿಂದ ಈ ಕೋಟಾದಡಿ ಪ್ರವೇಶ ಬಯಸಿ ಕ್ಲೇಮು ಮಾಡುವ ವಿದ್ಯಾರ್ಥಿಗಳ ವಿವರಗಳನ್ನು ತಂತ್ರಾಂಶದಲ್ಲಿ ದಾಖಲಿಸುವುದು ಸಂಸ್ಥೆಯ ಪ್ರಾಂಶುಪಾಲರ ಜವಾಬ್ದಾರಿಯಾಗಿರುತ್ತದೆ.

ಉಳಿದಂತೆ ಉಲ್ಲೇಖಿತ ಪ್ರವೇಶಾಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಅಭ್ಯರ್ಥಿಗಳ ಮತ್ತು ಪಾಲಕರ ಗಮನಕ್ಕೆ ತರುವುದು.

| |
|---|
| **ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.** |

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಗೆ,**

| | |
|---|---|
| *ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ* – | ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಮತ್ತು ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ತರುವುದು. |

<u>ಪ್ರತಿ ಮಾಹಿತಿಗಾಗಿ:-</u>

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ.
4) ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ,
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
6) ಎಸ್‌ಟಿಎಲ್, ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ.ಆರ್.ಎಸ್ ವಿಭಾಗಕ್ಕೆ – ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
8) ಇ-ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
9) ಕಡತಕ್ಕೆ.

Scanned with CamScanner